[redacted]



# ಕವಲೂರು ಗ್ರಾಮದ ನೀರಿನ ಸ್ಥಳಗಳಿಗೆ ತಹಶೀಲ್ದಾರ, ಇಓ ಭೇಟಿ: ಪರಿಶೀಲನೆ ಕವಲೂರು ಗ್ರಾಮಸ್ಥರಿಗೆ ಕುಡಿಯುವ ನೀರಿನ ಕೊರತೆ ಇಲ್ಲ: ದುಂಡಪ್ಪ ತುರಾದಿ



ಕೊಪ್ಪಳ ಏಪ್ರಿಲ್ :: ಕೊಪ್ಪಳ ತಾಲೂಕಿನ ಕವಲೂರು ಗ್ರಾಮಕ್ಕೆ ಪೂರೈಸಲಾಗುತ್ತಿರುವ ಕುಡಿಯುವ ನೀರಿನ ಮೂಲಗಳು, ನೀರಿನ ಸರಬರಾಜು ವ್ಯವಸ್ಥೆ, ಕುಡಿಯಲು ಮತ್ತು ಬಳಕೆಗೆ ಲಭ್ಯವಿರುವ ನೀರಿನ ಬಗ್ಗೆ, ಶುದ್ಧ ಕುಡಿಯವ ನೀರಿನ ಘಟಕಗಳ ಕಾರ್ಯನಿರ್ವಹಣೆ ಮತ್ತು ಕೆರೆಗಳಿಗೆ ಕೊಪ್ಪಳ ತಹಶೀಲ್ದಾರರಾದ ವಿಠ್ಠಲ್ ಚೌಗಲಾ ಮತ್ತು ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ದುಂಡಪ್ಪ ತುರಾದಿ ಅವರು ಗುರುವಾರ ಜಂಟಿಯಾಗಿ ಕವಲೂರು ಗ್ರಾಮಕ್ಕೆ ಭೇಟಿ ನೀಡಿ ನರೀನ ಲಭ್ಯತೆ ಬಗ್ಗೆ ಖುದ್ದಾಗಿ ಪರಿಶೀಲಿಸಿದ್ದು ಕುಡಿಯುವ ನೀರಿಗೆ ಯಾವುದೇ ತೊಂದರೆ ಇಲ್ಲ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ದುಂಡಪ್ಪ ತುರಾದಿ ಅವರು ಸ್ಪಷ್ಟೀಕರಣ ನೀಡಿದ್ದಾರೆ.

ಕವಲೂರು ಗ್ರಾಮದಲ್ಲಿ 10 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇರುತ್ತದೆ. ಗ್ರಾಮದಲ್ಲಿ 10 ಸರಕಾರಿ ಬೋರ್ವೆಲ್ ಗಳಿದ್ದು, ಅವುಗಳಲ್ಲಿ 05 ಕಾರ್ಯನಿವಹಿಸುತ್ತಿವೆ. ಇನ್ನೂಳಿದ 05 ಬೋರ್ವೆಲ್‌ಗಳು ಮಳೆಯ ಕೊರತೆಯಿಂದ ಬತ್ತಿರುತ್ತವೆ. ಗ್ರಾಮದಲ್ಲಿ ಲಭ್ಯವಿರುವ ಹೆಚ್ಚಿನ ಇಳುವರಿ ಇರುವ 03 ಸಂಖ್ಯೆ ಖಾಸಗಿ ಬೋರ್ವೆಲ್‌ಗಳನ್ನು ಬಾಡಿಗೆ ತೆಗೆದುಕೊಳ್ಳಲಾಗಿರುತ್ತದೆ. ಪ್ರತಿದಿನ ಟ್ಯಾಂಕರ್ ಮುಖಾಂತರ 04 ಟ್ರಿಪ್ ನೀರನ್ನು ಶಾಲೆ, ಅಂಗನವಾಡಿ ಹಾಗೂ ಹಾಸ್ಟೇಲ್‌ಗಳಿಗೆ ಪೂರೈಸಲಾಗುತ್ತಿದೆ. 03 ಕೆರೆಗಳಿದ್ದು, 02 ಕೆರೆಗಳಲ್ಲಿ ಸಾಕಳ್ಟು ಪ್ರಮಾಣದ ನೀರಿನ ಲಭ್ಯತೆ ಇರುತ್ತದೆ. 01 ಕೆರೆಯು ಖಾಲಿಯಾಗಿರುತ್ತದೆ. ತುಂಗಭದ್ರಾ ನದಿ ಪ್ರದೇಶದ ನೆಲೋಗಿಪುರ ಗ್ರಾಮದ ಹತ್ತಿರ ಇರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಲ್ಲಿ ಕವಲೂರು ಸೇರಿದಂತೆ ಅಳವಂಡಿ, ಹಟ್ಟಿ ಮತ್ತು ಬೋಚನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ 14 ಗ್ರಾಮಗಳಿಗೆ ಕುಡಿಯುವ ನೀರನ್ನು ಪೂರೈಸುವ ವ್ಯವಸ್ಥೆ ಇರುತ್ತದೆ. ಆದರೆ ತುಂಗಭದ್ರಾ ನದಿ ಪಾತ್ರದ ನೀರು ಖಾಲಿಯಾಗಿರುವುದರಿಂದ ಕಳೆದ ಒಂದು ತಿಂಗಳಿಂದ ಈ ಯೋಜನೆಯ ಮೂಲಕ ಗ್ರಾಮಕ್ಕೆ ನೀರು ಪೂರೈಕೆ ಸ್ಥಗಿತವಾಗಿರುತ್ತದೆ.

ಗ್ರಾಮಕ್ಕೆ ತಹಶೀಲ್ದಾರರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳು ಭೇಟಿ ನೀಡಿದ ಸಂದರ್ಭದಲ್ಲಿ ಪ್ರಜಾವಾಣಿ ಮತ್ತು ಸುದಾ ವಾರ ಪತ್ರಿಕೆಯಲ್ಲಿ ಪ್ರಕಟವಾಗಿರುವಂತೆ ಗ್ರಾಮಸ್ಥರಿಗೆ ಕುಡಿಯಲು ಕೆರೆಯ ನೀರೇ ಆಧಾರ ಎಂಬ ಪರಿಸ್ಥಿತಿ ಕಂಡು ಬಂದಿರುವುದಿಲ್ಲ. ಪತ್ರಿಕೆಯಲ್ಲಿ ಬತ್ತಿ ಹೋಗಿರುವ ಕೆರೆಯ ಚಿತ್ರವನ್ನು ಮಾತ್ರ ತೋರಿಸಿ ವರದಿ ಮಾಡಲಾಗಿರುತ್ತದೆ. ಗ್ರಾಮದಲ್ಲಿರುವ ಸಾಕಳ್ಟು ನೀರಿನ ಸಂಗ್ರಹಣೆ ಇರುವ 02 ಕೆರೆಗಳ ಬಗ್ಗೆ ಯಾವುದೇ ವರದಿ ಪ್ರಕಟಿಸಿರುವುದಿಲ್ಲ. ಸರಕಾರಿ ಮತ್ತು ಖಾಸಗಿ ಬೋರ್ವೆಲ್ ಗಳಿಂದ ನೀರನ್ನು ಪೂರೈಸುತ್ತಿರುವ ಬಗ್ಗೆಯೂ ಯಾವುದೇ ವರದಿ ಮಾಡಿರುವುದಿಲ್ಲ. ಬತ್ತಿರುವ ಮತ್ತು ನೀರಿನ ಸಂಗ್ರಹಣೆ ಇರುವ ಒಂದು ಕೆರೆ ಅಕ್ಕ-ಪಕ್ಕದಲ್ಲೆಯಿದ್ದು, ಒಂದಕ್ಕೊಂದು ಹೊಂದಿಕೊಂಡಿರುತ್ತವೆ. ಪತ್ರಿಕೆಯಲ್ಲಿ ಪ್ರಕಟವಾಗಿರುವಂತೆ ಬತ್ತಿರುವ ಕೆರೆಯ ಪಾತ್ರದಲ್ಲಿನ ರಾಡಿ ನೀರನ್ನು ತೆಗೆದುಕೊಂಡು ಹೋಗಿ ಕುಡಿಯುವ ಪರಿಸ್ಥಿತಿ ಇರುವುದಿಲ್ಲ. ಈ ಬಗ್ಗೆ ಗ್ರಾಮಸ್ಥರನ್ನು ಮಾತನಾಡಿಸಿದಾಗ ಅವರು ಬತ್ತಿಹೋಗಿರುವ ಕೆರೆಯ ಪಾತ್ರದಲ್ಲಿನ ರಾಡಿ ನೀರನ್ನು ತೆಗೆದುಕೊಂಡು ಹೋಗುವುದಿಲ್ಲವೆಂದು ಹಾಗೂ ಶುದ್ಧ ಕುಡಿಯುವ ನೀರಿನ ಘಟಕದ ನೀರು, ಸರಕಾರಿ ಮತ್ತು ಖಾಸಗಿ ಬೊರವೇಲ್ ನೀರನ್ನು ಕುಡಿಯಲು ಮತ್ತು ಸಾಕಳ್ಟು ನೀರಿನ ಸಂಗ್ರಹಣೆ ಇರುವ ಕೆರೆಯ ನೀರನ್ನು ದಿನಬಳಕೆಗೆ ಬಳಸುತ್ತಿರುವುದಾಗಿ ಸಾರ್ವಜನಿಕರು ತಿಳಿಸಿರುತ್ತಾರೆ.

ಪ್ರಸ್ತುತ ಗ್ರಾಮಕ್ಕೆ 05 ಸರಕಾರಿ ಬೋರ್ವೆಲ್ ಗಳು, 03 ಖಾಸಗಿ ಬೊರವೆಲ್ ಗಳು, 04 ಟ್ರಿಪ್ ಟ್ಯಾಂಕರ್ ಮೂಲಕ ನೀರನ್ನು ಪೂರೈಸಲಾಗುತ್ತಿದ್ದು, ಸಾಕಳ್ಟು ನೀರಿನ ಲಭ್ಯತೆ ಇರುತ್ತದೆ. ಯಾವುದೇ ನೀರಿನ ಅಭಾವ ಇರುವುದಿಲ್ಲ ಎಂದು ತಾಲೂಕು ಪಂಚಾಯತ್ ಸ್ಪಷ್ಟನೆ ನೀಡಿದೆ.

ಭೇಟಿಯ ವೇಳೆಯಲ್ಲಿ ಕಂದಾಯ ನೀರಿಕ್ಷಕರು, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಆಡಳಿತ ಅಧಿಕಾರಿ ಮತ್ತು ಗ್ರಾಮಸ್ಥರು ಹಾಜರಿದ್ದರು.

# ಕಲಾವಿದರ ಮಾಸಾಶನ: ಜೀವಿತಾವಧಿ ಪ್ರಮಾಣ ಪತ್ರ ಸಲ್ಲಿಸಲು ಸೂಚನೆ

ಕೊಪ್ಪಳ ಏಪ್ರಿಲ್ : ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಈಗಾಗಲೇ ಮಾಸಾಶನ ಪಡೆಯುತ್ತಿರುವ ಕಲಾವಿದರು, ಸಾಹಿತಿಗಳು ಹಾಗೂ ಮೃತ ಸಾಹಿತಿ ಅಥವಾ ಕಲಾವಿದರು ಅವಲಂಭಿತರು ಜೀವಿತಾವಧಿ ಪ್ರಮಾಣ ಪತ್ರ ಸಲ್ಲಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಮಾಸಾಶನ ಪಡೆಯುತ್ತಿರುವ ಕಲಾವಿದರು, ಸಾಹಿತಿಗಳು ಹಾಗೂ ಮೃತ ಸಾಹಿತಿ ಅಥವಾ ಮೃತ ಕಲಾವಿದರಿಗೆ ಸಂಬಂಧಿಸಿದಂತೆ ವಿಧವಾ ಮಾಸಾಶನದಾರರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಜೀವಿತಾವಧಿ ಪ್ರಮಾಣ ಪತ್ರದ ನಿಗದಿತ ನಮೂನೆ ಪಡೆದು ತಾವು ಮಾಸಾಶನ ಪಡೆಯುತ್ತಿರುವ ಬ್ಯಾಂಕಿನ ವ್ಯವಸ್ಥಾಪಕರಿಂದ ಧೃಡಿಕರಿಸಿ ಪ್ರಮಾಣ ಪತ್ರದ ಪ್ರತಿಯನ್ನು ಹಾಗೂ ಮಾಸಾಶನದ ಆದೇಶ ಪ್ರತಿ, ಆಧಾರ್ ಕಾರ್ಡ್, ಮಾಸಾಶನ ಪಡೆಯುತ್ತಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿಗಳನ್ನು ತಮ್ಮ ಸಹಿಯೊಂದಿಗೆ ಧೃಡಿಕರಿಸಿ ಏಪ್ರಿಲ್ 30 ರೊಳಗಾಗಿ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

# 'ಸರಸ್ವತಿ' ಪುತ್ರನಿಗೆ ಗೃಹ'ಲಕ್ಷ್ಮೀ'ಯ ಸಾಥ್

"ಗೃಹಲಕ್ಷ್ಮೀ" ಎಂಬ ಅರ್ಥಪೂರ್ಣ ಹೆಸರಿನ ಈ ಒಂದು ಯೋಜನೆಯು ನಾಡನ್ನು ಸರ್ವಜನಾಂಗದ ಶಾಂತಿಯು ತೋಟವನ್ನಾಗಿಸುವ ಹಬ್ಬಯಕೆಯಿಂದ ಅಧಿಕಾರದ ಗದ್ದುಗೇರಿರಿರುವ ರಾಜ್ಯ ಕಾಂಗ್ರೆಸ್ (ಜೋಡೆತ್ತು) ಸರ್ಕಾರದ ಅತ್ಯಂತ ಮಹತ್ವಾಕಾಂಕ್ಷಿ, ಬಡ ಕುಟುಂಬಗಳ ಪರವಾದ ಯೋಜನೆಯಾಗಿದೆ. ರಾಜ್ಯ ಕಾಂಗ್ರೆಸ್ ಸರ್ಕಾರದ ಐದು ಗ್ಯಾರೆಂಟಿ ಯೋಜನೆಗಳಲ್ಲಿ ಅತ್ಯಂತ ಪ್ರಮುಖವಾಗಿರುವ ಬಡವರ ಪರವಾದ ಈ ಯೋಜನೆಯಿಂದ ಮನೆಯ ಯಜಮಾನಿಗೆ ಪ್ರತಿ ತಿಂಗಳು 2000 ರೂಪಾಯಿ ನೀಡಲಾಗುತ್ತದೆ.

ಸರ್ಕಾರದ ಈ ಮಹತ್ವಾಕಾಂಕ್ಷಿ ಯೋಜನೆಯಿಂದ ಅನೇಕ ಬಡ ಕುಟುಂಬಗಳ ಜೀವನಮಟ್ಟ ಸುಧಾರಿಸಿದೆ. ಅದೆಷ್ಟೋ ಬಡ ಕುಟುಂಬಗಳಲ್ಲಿ ಹೊಸ ಬೆಳಕು ಮೂಡಿದೆ. ಅಲ್ಲದೇ ಅನೇಕ ಬಡಜನರ ಬದುಕು ಹಸನಾಗಿದೆ ಎಂದೇ ಬಣ್ಣಿಸಲಾಗುತ್ತಿದೆ. ಸರ್ಕಾರದ ಇಂತಹದೊಂದು ಮಹತ್ವಾಕಾಂಕ್ಷಿ ಯೋಜನೆಯು ಹಲವು ಬಡ ಮಹಿಳೆಯರಿಗೆ ಆರ್ಥಿಕವಾಗಿ ಬಹಳ ಸಹಕಾರಿಯಾಗಿದೆ. ಇದರಿಂದ ಅವರ ಮನೆ ಮನಗಳಲ್ಲಿ ಹರ್ಷದ ಹೊನಲು ಹರಿಯುವಂತಾಗಿದೆ ಎಂದೂ ಶ್ಲಾಘಿಸಲಾಗುತ್ತದೆ.

ಆದರೂ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾಗಿರುವ ಗೃಹಲಕ್ಷ್ಮಿ ??ೀ ಯೋಜನೆಯ ಲಾಭದ ಬಗ್ಗೆ ಅನೇಕರು ಪ್ರಶ್ನಿಸುತ್ತಿದ್ದರು. ಈ ಯೋಜನೆಯ ಬಗ್ಗೆ ಕೆಲವರು ಇಲ್ಲಸಲ್ಲದ ಕುಹುಕ ಮಾತುಗಳನ್ನಾಡಿದ್ದರು. ಆದರೆ ಇದೀಗ ಈ ಬಾರಿ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶದಲ್ಲಿ ಕಲಾ ವಿಭಾಗದಲ್ಲಿ ಪ್ರಥಮ ಸ್ಥಾನ ಗಳಿಸಿರುವ ಗುಮ್ಮಟ ನಗರಿ ವಿಜಯಪುರದ ವಿದ್ಯಾರ್ಥಿ ವೇದಾಂತ ನಾವಿ ರಾಜ್ಯ ಸರ್ಕಾರದ ಈ ಗೃಹಲಕ್ಷ್ಮಿ ??ೀ ಯೋಜನೆಯ ಹಣವನ್ನು ಬಳಸಿಕೊಂಡು ಪುಸ್ತಕಗಳನ್ನು ಖರೀದಿಸಿರುವುದಾಗಿ ಹೇಳುವ ಮೂಲಕ ಇನ್ನೊಮ್ಮೆ ಈ ಯೋಜನೆಯ ಮಹತ್ವವನ್ನು ಸಾರಿದ್ದಾನೆ. ಇದು ಅನೇಕರಿಗೆ ಮಾದರಿಯೂ ಆಗಿದೆ.

ಆರ್ಥಿಕ ಮುಗ್ಗಟ್ಟಿನಲ್ಲಿರುವ ನನ್ನ ಕುಟುಂಬಕ್ಕೆ ಸಿದ್ಧರಾಮಯ್ಯ ಸರ್ಕಾರ ನೀಡುವ ಗ್ಯಾರಂಟಿ ಯೋಜನೆ ಹಾಗೂ ಮೋದಿ ಸರ್ಕಾರ ರೈತರಿಗೆ ನೀಡುವ ಹಣ ನೆರವಿಗೆ ಬಂತು ಎಂದು ರಾಜ್ಯಕ್ಕೆ ಕಲಾ ವಿಭಾಗದಲ್ಲಿ ಪ್ರಥಮ ರ್‍ಯಾಂಕ್ ಪಡೆದಿರುವ ಈ ವೇದಾಂತ ನಾವಿ ಅತ್ಯಂತ ಸಂತಸ ವ್ಯಕ್ತಪಡಿಸಿದ್ದಾರೆ.

ಕ್ಷೌರಿಕ ವೃತ್ತಿ ಮಾಡುತ್ತಿದ್ದ ತಂದೆಯನ್ನು ಕಳೆದುಕೊಂಡ ಬಳಿಕ ತಮ್ಮ ಕುಟುಂಬ ಭಾರಿ ಆರ್ಥಿಕ ಸಂಕಷ್ಟದಲ್ಲಿತ್ತು. ಆದರೆ ಪ್ರಧಾನಿ ಮೋದಿ ಅವರ ಸರ್ಕಾರ ಭೂಮಿ ಹೊಂದಿರುವ ರೈತರ ಖಾತೆಗೆ ಜಮೆ ಮಾಡಿದ ಕಿಸಾನ್ ಸಮ್ಮಾನ ಯೋಜನೆಯ ಹಣ ನಮ್ಮ ಕುಟುಂಬದ ಆರ್ಥಿಕ ಶಕ್ತಿಗೆ ನೆರವಾಯಿತು ಎಂದು ಸ್ಮರಿಸಿದ್ದಾರೆ.

ಅದರಲ್ಲೂ ಕಳೆದ ವರ್ಷದಿಂದ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ನಮ್ಮ ಕುಟುಂಬಕ್ಕೆ ಸಹಕಾರಿ ಆಗಿವೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಸರ್ಕಾರ ಜಾರಿಗೆ ತಂದಿರುವ ಗೃಹಲಕ್ಷ್ಮಿ ಯೋಜನೆಯ ಹಣ ನಮ್ಮ ಕುಟುಂಬಕ್ಕೆ ಸಾಕಷ್ಟು ನೆರವಾಗಿದೆ. ನಮ್ಮ ತಾಯಿಯ ಬ್ಯಾಂಕ್ ಖಾತೆಗೆ ಜಮೆಯಾದ ಗೃಹಲಕ್ಷ್ಮೀ ಯೋಜನೆ ಹಣ ನನ್ನ ಓದಿಗೆ ಹೆಚ್ಚು ಪ್ರಯೋಜನಕಾರಿ ಆಯ್ತು. ಸರ್ಕಾರದ ಯೋಜನೆಗಳಿಂದ ನಮ್ಮ ಕುಟುಂಬಕ್ಕೆ ಬಂದ ನೆರವಿನ ಹಣ ನನ್ನ ಶೈಕ್ಷಣಿಕ ಸಾಧನೆಯಲ್ಲಿ ಮಹತ್ವದ ಪಾತ್ರ ವಹಿಸಿವೆ ಎಂದು ಬಹಳ ಸಂತೃಪ್ತಿ ವ್ಯಕ್ತಪಡಿಸಿದ್ದಾರೆ.

ಕೋವಿಡ್‌ನಲ್ಲಿ ತಂದೆ ತೀರಿಕೊಂಡ ನಂತರ ಅಮ್ಮ ದುಡಿದು ನಮ್ಮನ್ನು ಸಾಕುತ್ತಿದ್ದರು. ವಯಸ್ಸಾದ ಕಾರಣ ಅವರಿಗೆ ದುಡಿಯಲು ಹೋಗುವುದನ್ನು ಬಿಡಿಸಿದ್ದೆವು. ಆಗ ಇದ್ದ ಜಮೀನನ್ನು ಪಾಲಿಗೆ ನೀಡಿ ಬಂದ ಹಣ ಹಾಗೂ ಅಮ್ಮನಿಗೆ ಬರುತ್ತಿದ್ದ ಗೃಹಲಕ್ಷ್ಮಿ ??ೀ ಯೋಜನೆಯ ಎರಡು ಸಾವಿರ ಹಣ, ಕೇಂದ್ರದ ಪಿಎಂ ಕಿಸಾನ್ ಯೋಜನೆಯ ಹಣ ನನ್ನ ವಿದ್ಯಾಭ್ಯಾಸಕ್ಕೆ ನೆರವಾದವು ಅದರಿಂದಲೂ ನನಗೆ ಈ ಸಾಧನೆ ಮಾಡುವ ಶಕ್ತಿ ಬಂತು. ಮುಂದೆ ಪದವಿ ಪಡೆದು ಐಎಎಸ್. ಕೆಎಎಸ್ ಮಾಡುವ ಕನಸು ಕಟ್ಟಿಕೊಂಡಿದ್ದೇನೆ ಎಂದು ತಮ್ಮ ಮನದಾಳದ ಮಾತುಗಳನ್ನು ಬಿಚ್ಚಿಟ್ಟುಕೊಂಡಿದ್ದಾರೆ.

ಇದೆಲ್ಲದರ ಹಿನ್ನೆಲೆ ಸಿಎಂ ಸಿದ್ಧರಾಮಯ್ಯ "ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಬಂದಿರುವ ವಿಜಯಪುರದ ಹುಡುಗ ಕುಟುಂಬದ ಹಿನ್ನೆಲೆ ವಿವರಿಸುತ್ತಾ ಬಡತನದಲ್ಲೇ ಶಿಕ್ಷಣ ಪಡೆಯುತ್ತಿರುವ ತನಗೆ ಗೃಹಲಕ್ಷ್ಮಿ ??ೀ ಯೋಜನೆಯ ಹಣದಿಂದ ಅನುಕೂಲವಾಯಿತು ಎಂದಿದ್ದನ್ನು ಕೇಳಿ ಖುಷಿಯಾಯಿತು. ಗ್ಯಾರೆಂಟಿ ಯೋಜನೆಗಳನ್ನು ಬಿಟ್ಟಿ ಭಾಗ್ಯಗಳೆಂದು ಹೀಗಳೆವ ಮಂದಿಗೆ ಇದು ತಪರಾಕಿ ಬಾರಿಸಿದಂತಿದೆ" ಎಂದು ಗ್ಯಾರೆಂಟಿಗಳ ಬಗ್ಗೆ ಸಾರ್ಥಕತೆಯ ಭಾವ ವ್ಯಕ್ತಪಡಿಸಿದ್ದರೆ, ಡಿಸಿಎಂ ಡಿಕೆ ಶಿವಕುಮಾರ್ ಅವರೂ ಕೂಡ "ನಮ್ಮ ಗ್ಯಾರೆಂಟಿ ಯೋಜನೆಗಳ ಬಗ್ಗೆ ಮತ್ತೊಮ್ಮೆ ಎದೆ ತಟ್ಟಿ ಹೇಳಿಕೊಳ್ಳುವ ಸಂದರ್ಭ ಬಂದಿದೆ. ಪಿಯು ಪರೀಕ್ಷೆಯಲ್ಲಿ ರಾಜ್ಯಕ್ಕೇ ಟಾಪರ್ ಆಗಿರುವ ವೇದಾಂತ್ ಜ್ಞಾನೋಬಾ ನಾವಿ ಅವರು ಓದಲು ನಮ್ಮ ಗೃಹಲಕ್ಷ್ಮಿ ??ೀ ಯೋಜನೆಯ ಹಣ ನೆರವಿಗೆ ಬಂದಿದೆ ಎಂಬುದನ್ನು ಮಾಧ್ಯಮಗಳ ಮೂಲಕ ತಿಳಿದುಕೊಂಡೆ. ನಮ್ಮ ಗ್ಯಾರೆಂಟಿಗಳ ಬಗ್ಗೆ ಹೆಮ್ಮೆ ಮೂಡುತ್ತಿದೆ. ವೇದಾಂತ್ ನೀನು ನಿಜವಾದ ಹೀರೋ" ಎಂದು ಗ್ಯಾರೆಂಟಿಗಳ ಕುರಿತು ಹೆಮ್ಮೆಯ ಭಾವನೆ ವ್ಯಕ್ತಪಡಿಸಿದ್ದಾರೆ.

ಇನ್ನು ಮೂಲತಃ ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲೂಕಿನ ಕಲಬೀಳಗಿ ಗ್ರಾಮದ ವೇದಾಂತ ಜ್ಞಾನೋಬಾ ನಾವಿ ಶೇ. 99.33 ರಷ್ಟು ಅಂಕ ಪಡೆದು ಈ ಸಾಧನೆ ಮೆರೆದಿದ್ದಾರೆ. ಕಷ್ಟಪಟ್ಟು- ಇಷ್ಟಪಟ್ಟು ಓದುತ್ತಿರುವ ನಗರದ ಪ್ರತಿಷ್ಠಿತ ಬಿ. ಎಲ್. ಡಿ. ಇ ಸಂಸ್ಥೆಯ ಎಸ್. ಎಸ್. ಪಿ. ಯು ಕಾಲೇಜಿನ ವಿದ್ಯಾರ್ಥಿ ವೇದಾಂತ ನಾವಿ ದ್ವಿತೀಯ ಪಿಯು ಪರೀಕ್ಷೆಯ ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆಯುವ ಮೂಲಕ ಬಸವನಾಡು ವಿಜಯಪುರ ಜಿಲ್ಲೆಗೆ ಕೀರ್ತಿ ತಂದಿದ್ದಾನೆ.

ಬಹಳ ಕಷ್ಟಪಟ್ಟು- ಇಷ್ಟಪಟ್ಟು ಓದುತ್ತಿರುವ ಪ್ರತಿಭಾವಂತ ವಿದ್ಯಾರ್ಥಿಯ ಈ ಸಾಧನೆಗೆ ಜಿಲ್ಲಾದ್ಯಂತ ಸಂತಸ ವ್ಯಕ್ತವಾಗಿದ್ದು, ವಿದ್ಯಾರ್ಥಿಯ ಪೋಷಕರು, ಕಾಲೇಜಿನ ಅಧಿಕಾರಿಗಳು ಮತ್ತು ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ.

ಇಂತಹದೊಂದು ಸಾಧನೆಯ ಮೂಲಕ ಜಿಲ್ಲೆಗೆ ಕೀರ್ತಿ ತಂದಿರುವ ಈ ವಿದ್ಯಾರ್ಥಿಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳಿಂದಲೂ ಹೃದಯಸ್ಪರ್ಷಿ ಸನ್ಮಾನ ಮಾಡಿ ಗೌರವಿಸಲಾಗಿದ್ದು, ಜಿಲ್ಲೆಗೆ ಕೀರ್ತಿ ತಂದಿದ್ದಕ್ಕೆ ಅಭಿನಂದಿಸಿದ ಜಿಲ್ಲಾಧಿಕಾರಿ ಟಿ. ಭೂಬಾಲನ್ ಉಡುಗೊರೆ ನೀಡಿ ಶುಭಾಷಯ ಕೋರಿದ್ದಾರೆ.

ಅದರಂತೆ ಬಹಳ ಕಷ್ಟಪಟ್ಟು- ಇಷ್ಟಪಟ್ಟು ಓದುತ್ತಿರುವ ಪ್ರತಿಭಾವಂತ ವಿದ್ಯಾರ್ಥಿಯಾಗಿರುವ ವೇದಾಂತ ಅವರನ್ನು ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ ಪಾಟೀಲ ಅವರು ಆತ್ಮೀಯವಾಗಿ ಸನ್ಮಾನಿಸಿ, ಸಿಹಿ ತಿನ್ನಿಸಿ ಅವರ ಮುಂದಿನ ಶಿಕ್ಷಣಕ್ಕೆ ಶುಭ ಕೋರಿದ್ದಾರೆ. ಇಂತಹ ವಿದ್ಯಾರ್ಥಿಗಳ ಸಂಖ್ಯೆ ಇನ್ನಷ್ಟು ಹೆಚ್ಚಲಿ, ಇವರನ್ನು ನೋಡಿ ಇತರ ವಿದ್ಯಾರ್ಥಿಗಳೂ ಕಲಿಯಲಿ, ಬೆಸ್ಟ್ ಆಫ್ ಲಕ್ ವೇದಾಂತ್...

- ಮಂಜುನಾಥ.ಎಸ್. ಕಟ್ಟಿಮನಿ,ಹವ್ಯಾಸಿ ಪತ್ರಕರ್ತ ಹಾಗೂ ಲೇಖಕ,ವಿಜಯಪುರ

# ಗಿಣಿಗೇರಾದಲ್ಲಿ ಮತದಾನ ಜಾಗೃತಿ ಜಾಥಾ



ಕೊಪ್ಪಳ ಏಪ್ರಿಲ್ : ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ಕೊಪ್ಪಳ ತಾಲೂಕು ಪಂಚಾಯತ್, ತಾಲೂಕ ಸ್ವೀಪ್ ಸಮಿತಿ, ಗಿಣಿಗೇರಾ ಗ್ರಾಮ ಪಂಚಾಯತಿ ಹಾಗೂ ಅಲ್ಟ್ರಾಟೆಕ್ ಸಿಮೆಂಟ್ ಕಾರ್ಖಾನೆಯ ನೌಕರರು ಮತ್ತು ಕಾರ್ಮಿಕರಿಂದ ಗಿಣಿಗೇರಾದಲ್ಲಿ ಶುಕ್ರವಾರ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಿತು.

ಈ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ತಾಲೂಕ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹನಮಂತಪ್ಪ ಹಾಗೂ ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯ ಮಾನವ ಸಂಪನ್ಮೂಲ ಮುಖ್ಯಸ್ಥ ಪ್ರಭು ಕೊಪ್ಪದ ಅವರು ಚಾಲನೆ ನೀಡಿದರು.

ತಾಲೂಕ ಸ್ವೀಪ್ ನೋಡಲ್ ಅಧಿಕಾರಿ ಮಾತನಾಡಿ ಮೇ 7ರಂದು ಜರುಗುವ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವದರ ಮೂಲಕ ಸುಭದ್ರ ದೇಶವನ್ನಾಗಿ ನಿರ್ಮಿಸೋಣ. ಮತದಾನ ದಿನದಂದು ಚುನಾವಣೆ ಆಯೋಗ ನಿಗದಿಪಡಿಸಿದ ದಾಖಲಾತಿಗಳನ್ನು ತೆಗೆದುಕೊಂಡು ಹೋಗಿ ನಮಗೆ ಸೂಕ್ತ ಎನಿಸುವ ವ್ಯಕ್ತಿಗೆ ಮತ ಚಲಾಯಿಸಬೇಕು. ಕಾರ್ಖಾನೆಯ ಎಲ್ಲಾ ನೌಕರರು, ಕಾರ್ಮಿಕರು ಕಡ್ಡಾಯವಾಗಿ ತಪ್ಪದೇ ಮತದಾನ ಮಾಡಿ ಇತರರಿಗೆ ಮಾದರಿಯಾಗಬೇಕು. ಕಳೆದ ಲೋಕಸಭಾ ಚುನಾವಣೆಗಿಂತ ಈ ಬಾರಿ ವಿನೂತನವಾಗಿ ಸ್ವೀಪ್ ಕಾರ್ಯಕ್ರಮಗಳನ್ನು ಜರುಗಿಸುವ ಮೂಲಕ ಜಿಲ್ಲೆಯ ಮತದಾನ ಶೇಕಡಾವಾರು ಪ್ರಮಾಣವನ್ನು ಹೆಚ್ಚಿಸೋಣ. ಮತದಾನ ಪವಿತ್ರವಾದ ಕಾರ್ಯ. ಮತದಾನ ಮೂಲಕ ದೇಶಕ್ಕೆ ದೊಡ್ಡ ಕೊಡುಗೆ ನೀಡಿದಂತಾಗುತ್ತದೆ. ಸ್ವೀಪ್ ಕಾರ್ಯಕ್ರಮದಲ್ಲಿ ಸೇರಿರುವ ಎಲ್ಲಾ ನರೇಗಾ ಕೂಲಿಕಾರರು ನಮ್ಮ ಕುಟುಂಬದ 18 ವರ್ಷ ಮೇಲ್ಪಟ್ಟ ಸದಸ್ಯರು ಮತ ಚಲಾಯಿಸುವ ಮೂಲಕ ದೇಶಕ್ಕೆ ಸುಭದ್ರ ಆಡಳಿತ ಒದಗಿಸಲು ಕೈ ಜೋಡಿಸಬೇಕು ಎಂದು ತಿಳಿಸಿದರು.

ಸ್ವೀಪ್ ಕಾರ್ಯಕ್ರಮದಲ್ಲಿ ಅಲ್ಟ್ರಾಟೆಕ್ ಸಿಮೆಂಟ್ ಕಂಪನಿಯ ತಾಂತ್ರಿಕ ವಿಭಾಗದ ಮುಖ್ಯಸ್ಥರಾದ ರವಿಕುಮಾರ, ತಾಲೂಕ ಯೋಜನಾಧಿಕಾರಿ ರಾಜೇಸಾಬ್ ನದಾಫ್, ತಾಲೂಕ ಸ್ವೀಪ್ ಸಮಿತಿ ಸದಸ್ಯರಾದ ಬಸವರಾಜ ಬಳಿಗಾರ, ವಿರೇಶ್ ಬಡಿಗೇರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುಳಾದೇವಿ ಹೂಗಾರ, ಕಾರ್ಯದರ್ಶಿ ಮಂಜುನಾಥ, ಡಿಇಓ ರಾಜು, ರಾಜಾಭಕ್ಷಿ, ಕರವಸೂಲಿಗಾರ ಈಶ್ವರಯ್ಯ ಸೇರಿದಂತೆ ಕಾಯಕ ಬಂಧುಗಳು, ಕಾರ್ಖಾನೆಯ ನೌಕರರು, ಕಾರ್ಮಿಕರು ಉಪಸ್ಥಿತರಿದ್ದರು.

ಜಾಗೃತಿ ಜಾಥಾ ಮತ್ತು ಪ್ರತಿಜ್ಞಾವಿಧಿ ಸ್ವೀಕಾರ: ಸ್ವೀಪ್ ಕಾರ್ಯಕ್ರಮದ ಜಾಥಾವು ಗಿಣಿಗೇರಾ ಗ್ರಾಮದ ಹೊಂಡಾ ಬೈಕ್ ಶೋರೂಮ್ ನಂದ ಆರಂಭವಾಗಿ ಭಾರತೀಯ ಸ್ಟೇಟ್ ಬ್ಯಾಂಕ್ ವರೆಗೆ ನಮ್ಮ ಧ್ವನಿ, ನಮ್ಮ ಮತ, ನಮ್ಮ ಮತ ನಮ್ಮ ಹಕ್ಕು, ನಮ್ಮ ಓಟು ನಮ್ಮ ಪವರ್, ನಮ್ಮ ಮತ ನಮ್ಮ ಆಯ್ಕೆ ಘೋಷಣೆಗಳೊಂದಿಗೆ ಸಾಗಿ ಕೊನೆಗೊಂಡಿತು. ಕಂಪನಿಯ ಆವರಣದಲ್ಲಿ ಮತದಾರರ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

# ಬಿಜೆಪಿ ಅಭ್ಯರ್ಥಿಯಾಗಿ ಬಿ.ಶ್ರೀರಾಮುಲು ನಾಮಪತ್ರ ಸಲ್ಲಿಕೆ

ಬಳ್ಳಾರಿ ಏ :. ಗಣಿನಾಡು ಬಳ್ಳಾರಿಯಲ್ಲಿ ಇವತ್ತು ಎರಡು ಪಕ್ಷಗಳ ನಾಮಪತ್ರ ಸಲ್ಲಿಕೆಯ ಭರಾಟೆ ಜೋರಾಗಿತ್ತು ಕೆಂಡದಂತ ಬಿಸಿಲನ್ನು ಲೆಕ್ಕಿಸದೆ ಎರಡು ಪಕ್ಷದ ಸಾವಿರಾರು ಸಂಖ್ಯೆಯಲ್ಲಿ ಕಾರ್ಯಕರ್ತರು ಜಮಾವಣೆಗೊಂಡಿದ್ದರು. ಲೋಕಸಭಾ ಚುನಾವಣೆಯ ಕಾವು ಬಳ್ಳಾರಿ ಬಿಸಿಲನ್ನೆ ಮೀರಿಸುವ ರೀತಿ ಎರಡು ಪಕ್ಷದ ಕಾರ್ಯಕರ್ತರು ಸೇರಿದ್ದು ಎಲ್ಲರ ಹುಬ್ಬೇರುವಂತೆ ಮಾಡಿತ್ತು. ಇಂದು ಬಿಜೆಪಿಯಿಂದ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಶ್ರೀರಾಮುಲು ತಮ್ಮ ಉಮೇದುವಾರಿಕೆಯನ್ನು ಸಲ್ಲಿಸಿದರು. ನಗರದ ಎಸ್ ಪಿ ಸರ್ಕಲ್‌ನಂದ ಬೃಹತ್ ಮೆರವಣಿಗೆ ಮೂಲಕ ತೆರೆದ ವಾಹನದಲ್ಲಿ ತೆರಳಿದ ಶ್ರೀರಾಮುಲು ಅಂಡ್ ಟೀಂ ಎಸಿ ಸರ್ಕಲ್‌ನಂದ ದುರ್ಗಮ್ಮ ದೇವಸ್ಥಾನಕ್ಕೆ ಬಂದು ಕನಕ ದುರ್ಗಮ್ಮ ದೇವಿಗೆ ವಿಶೇಳ ಪೂಜೆ ಸಲ್ಲಿಸಿ, ದೇವಿಯ ದರ್ಶನ ಪಡೆದು ನಂತರ ಅಲ್ಲಿಂದ ಅಂಡರ್ ಬ್ರಿಡ್ಜ್ ಮೂಲಕ ಡಬಲ್ ರಸ್ತೆ ರಾಯಲ್ ವೃತ್ತ ಅಲ್ಲಿಂದ ಜಿಲ್ಲಾಧಿಕಾರಿಗಳ ಕಛೇರಿಗೆ ತೆರಳಿ ಜಿಲ್ಲಾ ಚುನಾವಣಾಧಿಕಾರಿಯಾದ ಪ್ರಶಾಂತ್ ಕುಮಾರ್ ಮಿಶ್ರಾ- ತಮ್ಮ ನಾಮಪತ್ರ ಸಲ್ಲಿಸಿದರು. ಇದಕ್ಕೂ ಮುನ್ನ ಎಸ್ ಪಿ ವೃತ್ತದಿಂದ ಹೊರಟ ಮೆರವಣಿಗೆಯಲ್ಲಿ ಬಿಜೆಪಿಯ ಸಾವಿರಾರು ಕಾರ್ಯಕರ್ತರ ಮಧ್ಯೆ ತೆರೆದ ವಾಹನದಲ್ಲಿ ಅಭ್ಯರ್ಥಿ ಶ್ರೀರಾಮುಲು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಎನ್.ರವಿಕುಮಾರ್, ಮಾಜಿ ಸಚಿವ ಆನಂದ್ ಸಿಂಗ್, ಮಾಜಿ ಶಾಸಕರುಗಳಾದ ಜಿ.ಸೋಮಶೇಖರ್ ರೆಡ್ಡಿ, ಟಿ.ಹೆಚ್.ಸುರೇಶ್ ಬಾಬು, ಶಾಸಕ ನೇಮಿರಾಜ್ ನಾಯ್ಕ, ಕೃಷ್ಣಾ ನಾಯ್ಕ, ವೈ.ಎಂ.ಸತೀಶ್, ಮುಖಂಡರಾದ ಗಾಲಿ ಲಕ್ಷ್ಮೀ ಅರುಣಾ, ಶ್ರೀರಾಮುಲುರವರ ಪತ್ನಿ ಭಾಗ್ಯಲಕ್ಷ್ಮಿ, ದೀಪಾ ಸುರೇಶ್ ಬಾಬು, ನಟಿ ಶೃತಿ ಸೇರಿದಂತೆ ಇನ್ನಿತರರು ಇದ್ದರು. ಮೆರವಣಿಗೆಯಲ್ಲಿ ಬಿಜೆಪಿ ಕಾರ್ಯಕರ್ತರ ಹರ್ಷೋದ್ಗಾರ ಜೈಕಾರ ಮುಗಿಲು ಮುಟ್ಟಿತ್ತು. ಕೆಂಡದಂತ ಸುಡು ಬಿಸಿಲನ್ನು ಲೆಕ್ಕಿಸದೇ ಕಾರ್ಯಕರ್ತರು ಡಿಸಿ ಕಛೇರಿವರೆಗೂ ಮೆರವಣಿಗೆಯಲ್ಲಿ ಸಾಗಿದರು. ಇನ್ನು ಮೆರವಣಿಗೆಯ ಉದ್ದಕ್ಕೂ ಕಾರ್ಯಕರ್ತರಿಗೆ ನೀರಿನ ಮತ್ತು ಮಜ್ಜಿಗೆ " ವ್ಯವಸ್ಥೆ ಮಾಡಲಾಗಿತ್ತು ಬಿಜೆಪಿ ಮುಖಂಡರು ತೆರದ ವಾಹನದಲ್ಲಿ ಕಾಣಿಸಿಕೊಂಡು ಒಗ್ಗಟ್ಟು ಪ್ರರ್ದಶಿಸಿದರು.

ಇತ್ತ ಬಿಜೆಪಿ ಕಾರ್ಯಕರ್ತರು ಸಾವಿರಾರು ಸಂಖ್ಯೆಯಲ್ಲಿ ಸೇರಿ ಶ್ರೀರಾಮುಲುರವರ ಶಕ್ತಿ ಪ್ರದರ್ಶನಕ್ಕೆ ಸಾಕ್ಷಿಯಾಯಿತು. ಮೆರವಣಿಗೆಯಲ್ಲಿ ಬಳ್ಳಾರಿ ಲೋಕಸಭಾ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ನಟಿ ಶೃತಿ, ಗಾಲಿ ಅರುಣಾ ಲಕ್ಷ್ಮಿ, ಹಡಗಲಿ ಶಾಸಕ ಕೃಷ್ಣನಾಯ್, ಮಾಜಿ ಸಚಿವ ಆನಂದ್ ಸಿಂಗ್, ಮಾಜಿ ಶಾಸಕರಾದ ಟಿ.ಹೆಚ್.ಸುರೇಶ್ .ಎಸ್.ಸೋಮಲಿಂಗಪ್ಪ, ಶ್ರೀರಾಮುಲು ಪತ್ನಿ ಭಾಗ್ಯಲಕ್ಷ್ಮೀ, ಮಗ ಧನುಷ್, ಹಂಪಿ ರಮಣ, ಕೆ.ಎಸ್.ದಿವಾಕರ್, ಹಗರಿಬೊಮ್ಮನಹಳ್ಳಿ ಶಾಸಕ ನೇಮಿರಾಜ್ ನಾಯ್ಕ, ಬಳ್ಳಾರಿ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ವಿಜಯನಗರ ಜಿಲ್ಲಾಧ್ಯಕ್ಷ ಚನ್ನಬಸವನಗೌಡ, ಪಾಲಿಕೆ ಸದಸ್ಯರಾದ ಶ್ರೀನಿವಾಸ ಮೋತ್ಕರ್, ಹನುಮಂತಪ್ಪ, ಗುಡಿಗಂಟಿ ಹನುಮಂತ, ಎಂ.ಗೋವಿಂದರಾಜುಲು, ವೇಮಣ್ಣ, ಮಲ್ಲನಗೌಡ, ಇಬ್ರಾಹಿಂ ಬಾಬು, ಸುರೇಖಾ, ಗುರುಲಿಂಗನಗೌಡ, ಓಬಳೇಶ್, ರಿಹಟ್ಟಿ ರಾಜಣ್ಣ, ಶಾಮ್ ಸುಂದರ್, ಗುಜರಿ ಅಜೀಜ್, ಡಾ.ಮಹಿಪಾಲ್, ಡಾ.ಅರುಣಾ, ಬಿಕೆ.ಸುಂದರ್, ಪಾಲಣ್ಣ, ಉಮೇಶ್, ತಿಮ್ಮಪ್ಪ, ನೂರ್ ಬಾಳ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಎಂ.ಎಸ್.ಸಿದ್ದಪ್ಪ ನಾಯಕ, ಸೋಮನಗೌಡ, ರಾಜೀವ್ ತೋಗರಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಮೋದಿ ಸರ್ಕಾರ ಮಹಿಳಾ ಸಬಲೀಕರಣಕ್ಕೆ ಒತ್ತು




ಬಳ್ಳಾರಿ ಏ :. ಮಹಿಳಾ ಸಬಲೀಕರಣಕ್ಕೆ ಕೇಂದ್ರದ ಬಿಜೆಪಿ ಸರ್ಕಾರ ಅನೇಕ ಯೋಜನೆ ಜಾರಿಗೆ ತಂದಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯೆ ಭಾರತಿ ಶೆಟ್ಟಿ ಹೇಳಿದ್ದಾರೆ. ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಪ್ರಧಾನ ನರೇಂದ್ರ ಮೋದಿ ಅವರು ದೇಶದ ಮಹಿಳೆಯರಿಗೆ ಶೇ 33 ರಷ್ಟು ಮೀಸಲಾತಿ ಕಲ್ಪಿಸಲು ಮುಂದಾಗಿದ್ದಾರೆ. ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ಕೇಂದ್ರ ಸರ್ಕಾರದ ಸ್ಟಾರ್ಟ್ ಆಪ್, ಸ್ಟ್ಯಾಂಡ್ ಆಪ್ , ಉಜ್ವಲ ಯೋಜನೆ, ಮುದ್ರಾ ಯೋಜನೆ ಮುಂತಾದ ಯೋಜನೆಗಳ ಮೂಲಕ ಮಹಿಳಾ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಿದೆ ಎಂದರು.ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್, ಪಾಲಿಕೆ ಸದಸ್ಯೆ ಸುರೇಖ ಮಲ್ಲನ ಗೌಡ, ಜಿಲ್ಲಾ ಅಧ್ಯಕ್ಷೆ ಸುಗುಣ, ಭಾಗ್ಯ ಲಕ್ಷ್ಮಿ ಪಕ್ಷದ ಮುಖಂಡರಾದ ಸುಮಾ ರೆಡ್ಡಿ ಸೇರಿದಂತೆ ಮತ್ತಿತರರು ಇದ್ದರು.

# ಏ.13 ರಂದು ಆದ್ಯವಚನಕಾರ ದೇವರದಾಸಿಮಯ್ಯನವರ ಜಯಂತಿ

ಬೆಳಗಾವಿ,ಏ. : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆದ್ಯವಚನಕಾರ ಶ್ರೀ ದೇವರದಾಸಿಮಯ್ಯನವರ ಜಯಂತಿಯನ್ನು ಏ.13 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುಮಾರ ಗಂಧರ್ವ ರಂಗಮಂದಿರದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.14 ರಂದು ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ

ಗದಗ ಏಪ್ರಿಲ್ : ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 133 ನೇ ಜಯಂತಿಯನ್ನು ಜಿಲ್ಲಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಏಪ್ರಿಲ್ 14 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಜಿಲ್ಲಾಡಳಿತ ಭವನ ಆಡಿಟೋರಿಯಂ ಹಾಲ್ ದಲ್ಲಿ ಹಮ್ಮಿಕೊಳ್ಳಲಾಗಿದೆ.

ಮಾದರಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಯಂತಿಯನ್ನು ಸರಳವಾಗಿ ಆಚರಿಸಲಾಗುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಶಾಂತ್ ವರಗಪ್ಪನವರ ಅವರು ತಿಳಿಸಿದ್ದಾರೆ.

# ಏ.16 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಮುಂದೂಡಿಕೆ

ಬೆಳಗಾವಿ,ಏ. : ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಮೆ:ಶಿವಶಕ್ತಿ ಸ್ಟೋನ್ ಕ್ರಷರ್ ಅವರು ಅಂಬೇವಾಡೆ ಗ್ರಾಮದ ಸರ್ವೆ ನಂ.59/11,16,17 ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆಯ ಒಟ್ಟು 4.26 ಎಕರೆ (1.882 ಹೆಕ್ಟೇರ್) ಪ್ರದೇಶದಲ್ಲಿ ವಾರ್ಷಿಕ 70,460 ಟನ್ (ಐದು ವರ್ಷಕ್ಕೆ) ಕಟ್ಟಡ ಕಲ್ಲು ಗಣಿಗಾರಿಕೆ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಿಲಾಗಿದ್ದು, ಸದರಿ ಕೈಗಾರಿಕೆ ಪರಿಸರ ಸಾರ್ವಜಿಕ ಆಲಿಕೆ ಸಭೆಯು ಮುಂದೂಡಿಸಲಾಗಿದೆ. ಸರದಿ ಗಣಿಗಾರಿಕೆ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಿಲಾಗಿದ್ದು, ಸದರಿ ಕೈಗಾರಿಕೆ ಪರಿಸರ ಸಾರ್ವಜಿಕ ಆಲಿಕೆ ಸಭೆಯು ಮುಂದೂಡಿಸಲಾಗಿದೆ. ಸರದಿ ಲೋಕಸಭಾ ಚುನಾವಣೆ ನಿಮಿತ್ಯ ಮಾದರಿ ನೀತಿ ಸಂಹಿತೆ ಜಾರಿ ಇರುವುದರಿಂದ ಜಿಲ್ಲಾಧಿಕಾರಿಗಳು ಪರಿಸರ ಸಾರ್ವಜನಕ ಆಲಿಕೆ ಸಭೆಯು ಏ.16ಕ್ಕೆ ಮುಂದೂಡಿರುತ್ತಾರೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರನ ಮಂಡಳಿಯ ಪರಿಸರ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.